ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 ದಿನಾಂಕ: 13–7–2016

# ಪತ್ರಿಕಾ ಪ್ರಕಟಣೆ

## ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯ ವ್ಯಾಪ್ತಿಯ 20 ಜಿಲ್ಲೆಗಳಾದ ಬಳ್ಳಾರಿ, ಬೆಳಗಾಂ, ವಿಜಯಪುರ, ಚಿತ್ರದುರ್ಗ, ಚಿಕ್ಕಮಗಳೂರು, ಧಾರವಾಡ, ಹಾಸನ, ಕೋಲಾರ, ಮಡಿಕೇರಿ, ಮೈಸೂರು, ಮಂಗಳೂರು, ರಾಯಚೂರು, ಶಿವಮೊಗ್ಗ, ತುಮಕೂರು, ರಾಮನಗರ, ಹಾವೇರಿ, ಕೊಪ್ಪಳ, ಬಾಗಲಕೋಟೆ, ಚಿಕ್ಕಬಳ್ಳಾಪುರ ಮತ್ತು ಉಡುಪಿಯಲ್ಲಿನ ಎ.ಎನ್.ಎಂ. ತರಬೇತಿ ಕೇಂದ್ರಗಳಲ್ಲಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ತರಬೇತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿಗೆ ಸೇರಬಯಸುವ ಅಭ್ಯರ್ಥಿಗಳು ಆಯಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳನ್ನು ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ **www.karhfw.gov.in** ವೀಕ್ಷಿಸಬಹುದಾಗಿದೆ.

ಮಮತಾ:ಜಿಪಿಆರ್

## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಮಾನ್ಯತೆ ಪಡೆದ ರಾಷ್ಟ್ರೀಯ ಚಾಂಪಿಯನ್‌ಷಿಪ್‌ಗಳಲ್ಲಿ ಪದಕವಿಜೇತ ಹಾಗೂ ಮಾನ್ಯತೆ ಪಡೆದ ಅಂತರರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಗಣನೀಯ ಸಾಧನೆ ದಾಖಲಿಸಿರುವ ಕರ್ನಾಟಕದ ಕ್ರೀಡಾಪಟುಗಳಿಂದ ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸಲೆನ್ಸ್ ಕಾರ್ಯಕ್ರಮದಡಿ 2016–17 ನೇ ಸಾಲಿನಲ್ಲಿ ಉನ್ನತ ಕ್ರೀಡಾ ತರಬೇತಿಗಾಗಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಿದೆ.

ಅರ್ಜಿ ನಮೂನೆ ಮತ್ತು ವಿವರಗಳನ್ನು ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು – 560 001 ಇಲ್ಲಿ ಅಥವಾ www.karnatakayouthportal.in www.karnataka.gov.in/dyss ಅಂತರ್ಜಾಲ ತಾಣಗಳಲ್ಲಿ ಪಡೆಯಬಹುದು.

ಭರ್ತಿಮಾಡಿದ ಅರ್ಜಿಗಳನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಜುಲೈ 30 ರೊಳಗಾಗಿ ಸಲ್ಲಿಸಬಹುದಾಗಿದೆ.

ಮಮತಾ:ಜಿಪಿಆರ್

# ಉನ್ನತ ತರಬೇತಿಗಾಗಿ ಸಹಾಯಧನ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ರಾಷ್ಟ್ರೀಯ ಚಾಂಪಿಯನ್‌ಷಿಪ್‌ಗಳಲ್ಲಿ ಪದಕ ವಿಜೇತ ಹಾಗೂ ಮಾನ್ಯತೆ ಪಡೆದ ಅಂತರ–ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಗಣನೀಯ ಸಾಧನೆ ದಾಖಲಿಸಿರುವ ಕರ್ನಾಟಕದ ಕ್ರೀಡಾಪಟುಗಳಿಗೆ ಉನ್ನತ ಕ್ರೀಡಾ ತರಬೇತಿಗಾಗಿ ಸಹಾಯಧನ ನೀಡಲು ಉದ್ದೇಶಿಸಿದೆ.

ಒಲಂಪಿಕ್ /ಪ್ಯಾರಾ ಒಲಿಂಪಿಕ್, ವಿಶ್ವ ಚಾಂಪಿಯನ್‌ಶಿಪ್, ಕಾಮನ್‌ವೆಲ್ತ್ ಗೇಮ್ಸ್, ಏಷ್ಯನ್ ಗೇಮ್ಸ್/ಏಷನ್ ಚಾಂಪಿಯನ್‌ಷಿಪ್ ಮತ್ತಿತರ ಪ್ರಮುಖ ಕ್ರೀಡಾಕೂಟಗಳಲ್ಲಿ ಪದಕ ಪಡೆಯುವ ಸಾಧ್ಯತೆ ಇರುವ ಸಂಭಾವ್ಯ ಪ್ರತಿಭಾನ್ವಿತ ಕ್ರೀಡಾಪಟುಗಳಿಗಾಗಿ ಕ್ರೀಡಾ ಕಿಟ್, ಪೌಷ್ಠಿಕ ಆಹಾರ, ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಪ್ರಯಾಣ ವೆಚ್ಚ ಹಾಗೂ ತರಬೇತಿಯ ವೆಚ್ಚ ಭರಿಸಲು ನಿಯಮಾನುಸಾರ ಸಹಾಯಧನ ನೀಡಲಾಗುವುದು.

ಹೆಚ್ಚಿನ ಮಾಹಿತಿಯನ್ನು ಹಾಗೂ ಅರ್ಜಿ ನಮೂನೆಯನ್ನು ಅರ್ಜಿ ನಮೂನೆಯನ್ನು ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು – 560 001 ಇಲ್ಲಿ ಪಡೆಯಬಹುದು. ದಾಖಲೆಗಳೊಂದಿಗೆ ಭರ್ತಿಮಾಡಿದ ಅರ್ಜಿ ಸಲ್ಲಿಸಲು ಜುಲೈ 30 ಕೊನೆಯ ದಿನವಾಗಿರುತ್ತದೆ. ಅಥವಾ www.karnatakayouthportal.in www.karnataka.gov.in/dyss ಅಂತರ್ಜಾಲ ತಾಣಗಳಲ್ಲಿ ಪಡೆಯಬಹುದು.

ಭರ್ತಿಮಾಡಿದ ಅರ್ಜಿಗಳನ್ನು ಮತ್ತು ಸ್ವಯಂ ದೃಢೀಕೃತ ದಾಖಲೆಗಳನ್ನು ಸೀಲ್‌ಮಾಡಿದ ಲಕೋಟೆಯಲ್ಲಿಟ್ಟು ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು – 560 001 ಜುಲೈ 30 ರೊಳಗಾಗಿ ಸಲ್ಲಿಸಬಹುದಾಗಿದೆ.

ಮಮತಾ:ಜಿಪಿಆರ್